Shravanee Builders
CC

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಹೆಚ್ಚುವರಿ ನಿರ್ದೇಶಕರು(ನಗರ ಯೋಜನೆ) ರವರ ಕಛೇರಿ,ಮಹಾನಗರ ಪಾಲಿಕೆ,ಎನ್.ಆರ್. ವೃತ್ತ,ಬೆಂಗಳೂರು-02.**

ಸಂಖ್ಯೆ: ಜೆಡಿಟಿಪಿ (ದ)/ಪ್ರಾ.ಪ/ಸನಿ/51/2014-15 ದಿನಾಂಕ: 02-03-2015.

## ಪ್ರಾರಂಭಿಕ ಪ್ರಮಾಣ ಪತ್ರ

ವಿಷಯ: ಆಸ್ತಿ ಸಂಖ್ಯೆ 20, 39ನೇ ಕ್ರಾಸ್, 8ನೇ ಬ್ಲಾಕ್, ಜಯನಗರ, ವಾರ್ಡ್ ಸಂಖ್ಯೆ 179, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/ JD South/ LP 0406/13-14 ದಿ: 06-09-2014.
2) ಅರ್ಜಿದಾರರ ಮನವಿ ದಿನಾಂಕ: 28-01-2015.
3) ಅಪರ ನಿರ್ದೇಶಕರು, ನಗರ ಯೋಜನೆ ರವರ ಆದೇಶ ದಿನಾಂಕ: 20-02-2015.

*****

ಜಯನಗರ, ವಾರ್ಡ್ ಸಂಖ್ಯೆ 179 ರಲ್ಲಿರುವ ಆಸ್ತಿ ಸಂಖ್ಯೆ 20, 39ನೇ ಕ್ರಾಸ್, 8ನೇ ಬ್ಲಾಕ್ ಇಲ್ಲಿ ನಿರ್ಮಿಸುತ್ತಿರುವ ನೆಲ+ಮೇಲಿನ 8 ಅಂತಸ್ತುಗಳ 16 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕಾಗಿ ನಕ್ಷೆ ಸಂಖ್ಯೆ: BBMP/Addl.Dir/ JD South/ LP 0406/13-14 ದಿ: 06-09-2014 ರಂದು ಮಂಜೂರಾತಿ ನೀಡಲಾಗಿದೆ. ವಸತಿ ಸಮುಚ್ಚಯ ಕಛೇರಿ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ಕಟ್ಟಡದ ಸ್ಥಳವನ್ನು ದಿನಾಂಕ: 06-02-2015 ರಂದು ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು ಮತ್ತು ಸಹಾಯಕ ಅಭಿಯಂತರರವರೊಂದಿಗೆ ಸ್ಥಳ ಪರಿಶೀಲಿಸಿದ್ದು, ವಲಯ ನಿಯಮಾವಳಿಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ಅಳವಡಿಸಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 15,000/- ಗಳನ್ನು ಅರ್ಜಿದಾರರು ರಸೀದಿ ಸಂಖ್ಯೆ: TP/JDTPSUT/01/2014-15/Feb/0031 ದಿನಾಂಕ: 26-02-2015 ರಂದು ಭರಿಸಿದ್ದು, ಸಂದಾಯಿಸಿ ಕೊಳ್ಳಲಾಗಿದೆ. ವಸತಿ ಸಮುಚ್ಚಯ ಕಛೇರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,
ಶ್ರೀ ಎಂ.ಎಸ್. ಶ್ರೀಧರ್
# 20, 39ನೇ ಕ್ರಾಸ್, 8ನೇ ಬ್ಲಾಕ್,
ಜಯನಗರ, ವಾರ್ಡ್ ಸಂಖ್ಯೆ 179,
ಬೆಂಗಳೂರು.